# ಬೆಲೆ ಏರಿಕೆ ನೆಪ ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ ಕಾಲದಲ್ಲಿ ಬೆಲೆಗಳು ದುಪ್ಪಟ್ಟಾಗಿವೆ – ಲಕ್ಷ್ಮೀ ಹೆಬ್ಬಾಳಕರ್



ಕಟಕೋಳ (ರಾಮದುರ್ಗ): 2014ರಲ್ಲಿ ಭಾರೀ ಬೆಲೆ ಏರಿಕೆಯಾಗಿದೆ ಎಂದು ಹೇಳಿ ಭಾರತೀಯ ಜನತಾ ಪಾರ್ಟಿ ಅಧಿಕಾರಕ್ಕೇರಿತು. ಆದರೆ ಬಿಜೆಪಿ ಅಧಿಕಾರಕ್ಕೆ ಬಂದ ಮೇಲೆ ಬೆಲೆಗಳು ಎರಡುಪಟ್ಟಿಗಿಂತ ಹೆಚ್ಚಾಗಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದರೆ.

ರಾಮದುರ್ಗ ತಾಲೂಕಿನ ಕಟಕೋಳದಲ್ಲಿ ಗುರುವಾರ ಸಂಜೆ ಲೋಕಸಭಾ ಚುನಾವಣೆ ನಿಮಿತ್ತ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಪ್ರಚಾರ ಮಾಡುತ್ತಿದ್ದರು. ಆಗ ಪೆಟ್ರೋಲ್ ಬೆಲೆ 50 ರೂ. ಇತ್ತು, ಇಂದು 100 ರೂ ಗಡಿ ದಾಟಿದೆ. ಆಗ ಸಿಲೆಂಡರ್ ಬೆಲೆ 450 ರೂ. ಇತ್ತು, ಇಂದು 1100 ರೂ ದಾಟಿದೆ. ಬಹುತೇಕ ಎಲ್ಲ ಕಿರಾಣಿ ಸಾಮಗ್ರಿ ಬೆಲೆ ಈಗ ವಿಪರೀತ ಏರಿದೆ. ಬಿಜೆಪಿ ಕಾಲದಲ್ಲಿ ಬೆಲೆಗಳು ಇಳಿಯುವ ಬದಲು ದುಪ್ಪಟ್ಟಾಗಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಲೆ ಏರಿಕೆಯಿಂದ ತತ್ತರಿಸಿರುವವರಿಗೆ ಏನಾದರೂ ಸಹಾಯ ಮಾಡಬೇಕೆಂದು ಕಾಂಗ್ರೆಸ್ ಸರಕಾರ 5 ಗ್ಯಾರಂಟಿಗಳನ್ನು ನೀಡಿದೆ. ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜನರಿಗೆ ಮುಟ್ಟುವ ವ್ಯವಸ್ಥೆ ಮಾಡಿದೆವು. ಮನೆ ಮನಗಳನ್ನು ಬೆಳಗಲು ಐದು ಯೋಜನೆಗಳನ್ನು ಜಾರಿಗೆ ತಂದೆವು. ಐದು ಗ್ಯಾರಂಟಿಗಳು ಇಂದು ಜನಪ್ರಿಯವಾಗಿವೆ. ಇಂದು ಗೃಹ ಲಕ್ಷ್ಮಿಯ 9ನೇ ಕಂತು ಜಮಾ ಮಾಡಲಾಗಿದೆ. ಪ್ರತಿಯೊಬ್ಬರ ಖಾತೆಗೆ ತಲಾ 18 ಸಾವಿರ ರೂ. ನೀಡಲಾಗಿದೆ. ಇದರಿಂದಾಗಿ ಬಡ ಕುಟುಂಬಗಳು ಸ್ವಲ್ಪವಾದರೂ ನೆಮ್ಮದಿ ಕಾಣಲು ಸಾಧ್ಯವಾಗಿದೆ. ಈಗ ಎಲ್ಲ ಗ್ಯಾರಂಟಿಗಳನ್ನು ಜಾರಿಗೊಳಿಸಿ ಮತ್ತೆ ನಿಮ್ಮ ಮುಂದೆ ನಿಂತಿದ್ದೇವೆ. ಕೊಟ್ಟ ಮಾತನ್ನು ಈಡೇರಿಸಿ ಮತ ಕೇಳಲು ಬಂದಿದ್ದೇವೆ ಎಂದು ಅವರು ಹೇಳಿದರು.

ಬಿಜೆಪಿಯವರು ನಾವು ತಂದಿರುವ ಗ್ಯಾರಂಟಿಗಳನ್ನು ಪ್ರಶ್ನಿಸುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಬಂದ್ ಮಾಡಲು ಹೇಳುತ್ತಿದ್ದಾರೆ. ಬಡವರಿಗೆ ಯೋಜನೆಗಳನ್ನು ಕೊಡುವುದು ಅವರಿಗೆ ಬೇಕಾಗಿಲ್ಲ. ಸ್ವತಂತ್ರ ಸಿಕ್ಕಿದ ನಂತರ 60 ವರ್ಷಗಳ ಕಾಲ ಕಾಂಗ್ರೆಸ್ ಆಡಳಿತ ಮಾಡಿದೆ. ಭಾರತ ಅತ್ಯಂತ ಸಂಕಷ್ಟದಲ್ಲಿದ್ದಾಗ, ಮಹಾಮಾರಿಗಳು ಬಂದಾಗ, ಮೂಲಭೂತ ಸೌಲಭ್ಯಗಳಿಲ್ಲದಾಗ ಕಾಂಗ್ರೆಸ್ ಅಧಿಕಾರ ವಹಿಸಿಕೊಂಡು ಇಂದು ಭಾರತವನ್ನು ಈ ಮಟ್ಟಕ್ಕೆ ತಂದು ನಿಲ್ಲಿಸಿದೆ. ನೆಹರು ಅವರು ತಂದ ಪಂಚವಾರ್ಷಿಕ ಯೋಜನೆ, ಹಸಿರು ಕ್ರಾಂತಿ, ಬ್ಯಾಂಕ್ ಗಳ ರಾಷ್ಟ್ರೀಕರಣ ಮೊದಲಾದವುಗಳ ಮೂಲಕ ಭಾರತವನ್ನು ಅಭಿವೃದ್ಧಿಯತ್ತ ತಂದು ನಿಲ್ಲಿಸಿದೆ ಎಂದು ಅವರು ಹೇಳಿದರು.

ಬಿಜೆಪಿ ನೀಡಿದ್ದ ಯಾವ ಭರವಸೆ ಈಡೇರಿದೆ ಹೇಳಿ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಹೇಳಿದ್ದರಲ್ಲಾ, ಎಲ್ಲಿದೆ ಉದ್ಯೋಗ ಕಪ್ಪು ಹಣ ತಂದು ನಿಮ್ಮ ಅಕೌಂಟ್ ಗೆ ಹಾಕುತ್ತೇವೆ ಎಂದು ಹೇಳಿದ್ದವರು ಇಂದು ಬ್ಯಾಂಕ್ ಗಳನ್ನು ಖಾಸಗಿಯವರ ಕೈಗೆ ಕೊಡುತ್ತಿದ್ದಾರೆ. ಶ್ರೀಮಂತರ ಕೈಗೆ ಕೊಡುತ್ತಿದ್ದಾರೆ. ಬಡವರಿಗೆ ತೊಂದರೆ ಕೊಡುತ್ತಿದ್ದಾರೆ. ರಾಷ್ಟ್ರೀಯ ಸಂಸ್ಥೆಗಳನ್ನು ಅಂಬಾನಿ, ಅದಾನಿಯವರ ಕೈಗೆ ಒಪ್ಪಿಸುತ್ತಿದ್ದಾರೆ. ನಿಜಾಂಶವನ್ನು ಅರ್ಥ ಮಾಡಿಕೊಳ್ಳಿ. ಕೇವಲ ಬಿಜೆಪಿಯವರ ಸುಳ್ಳನ್ನು ನಂಬಿ ಮೋಸ ಹೋಗಬೇಡಿ ಎಂದು ಅವರು ಮನವಿ ಮಾಡಿದರು.ಪ್ರದೀಪ ಪಟ್ಟಣ, ಸೋಮಶೇಖ ಸಿದ್ದಲಿಂಗಪ್ಪನವರ್, ರಾಯಪ್ಪ ಕತ್ತಿ, ಜಿ.ಬಿ.ರಂಗಣ್ಣಗೌಡರ್, ಪರ್ವತಗೌಡ ಪಾಟೀಲ, ಜಾವುರ್ ಹಾಜಿ, ಆರ್.ಕೆ.ಪಾಟೀಲ, ಮಾರುತಿ ಶಿರೆಗಾರ ಮೊದಲಾದವರು ಇದ್ದರು. ಇದಕ್ಕೂ ಮೊದಲು ಬಸ್ ನಿಲ್ದಾಣದಿಂದ ಬಜಾರ್ ಪೇಟೆ ವರೆಗೆ ಬೃಹತ್ ಮೆರವಣಿಗೆ ನಡೆಯಿತು.

# ನಾವು ಅಧಿಕಾರಕ್ಕೆ ಬಂದರೇ ರೈತರ ಪೂರ್ಣ ಸಾಲಮನ್ನಾ ಮಾಡುತ್ತೇವೆ–ರಾಹುಲ್‌ಗಾಂಧಿ



ಬಳ್ಳಾರಿ ಏ –: ಬಳ್ಳಾರಿ ನಗರದ ಮುನಿಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಕಾಂಗ್ರೆಸ್ ಚುನಾವಣಾ ಸಮಾವೇಶವನ್ನು ಆಯೋಜಿಸಿದ್ದರು. ರಾಹುಲ್ ಗಾಂಧಿ ಕಾಂಗ್ರೆಸ್ ಪಕ್ಷದಿಂದ ಚುನಾವಣಾ ಪ್ರಚಾರದ ಪ್ರಜಾಧ್ವನಿ ಸಮಾವೇಶವನ್ನು ಉದ್ದೇಶಿಸಿ ಮಾತನಾಡುತ್ತಾ ಈ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ಕೊಡಿ. ಕಳೆದ ಬಾರಿ ಕರ್ನಾಟಕದ ಚುನಾವಣೆ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಪಂಚ ಗ್ಯಾರೆಂಟಿಗಳನ್ನು ಜಾರಿಗೆ ತಂದಿದ್ದೆವೆ, ನಾನು ಹೇಳಿದ್ದನ್ನು ಮಾಡೇ ಮಾಡುತ್ತೇನೆ. ಬಳ್ಳಾರಿಯುನ್ನು ಜೀನ್ಸ್ ರಾಜಧಾನಿಯನ್ನಾಗಿ ಮಾಡಲಿದೆಂದು ಹೇಳಿತ್ತು. ಈ ಮಾತನ್ನು ಸಹ ಈಡೇರಿಸಲಿದೆ. ಜೀನ್ಸ್ ಪಾರ್ಕ್ ಮಾಡಲಿದೆ. ಈ ಬಗ್ಗೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ನವರ ಬಳಿ ಮಾತನಾಡಿರುವೆ ಜೀನ್ಸ್ ಪಾರ್ಕ್ ಆಗಲಿದೆಂದರು.

ಈ ಬಾರಿಯ ಚುನಾವಣೆ ಲೋಕತಂತ್ರ ಮತ್ತು ಸಂವಿಧಾನ ರಕ್ಷಣೆಗಾಗಿ ನಡೆಯುವ ಚುನಾವಣೆಯಾಗಿದೆ. ಈ ಬಾರಿ ಚುನಾವಣೆ ಗೆದ್ದರೆ ಸಂವಿಧಾನ ಬದಲಾವಣೆ ಮಾಡುವುದಾಗಿ ಬಿಜೆಪಿ ಹೇಳಿದ್ದಾರೆ.ಬಡಜನತೆಗೆ, ಹಿಂದುಳಿದ, ದುರ್ಬಲವರ್ಗಕ್ಕೆ ಸಂವಿಧಾನ ಬರವ ಮುನ್ನ ಅವರಿಗೆ ಯಾವುದೇ ಹಕ್ಕು ಇರಲಲ್ಲ. ಸ್ವಾತಂತ್ರ್ಯ ನಂತರ ಸಂವಿಧಾನ ರಚಿಸಿ ಅವರಿಗೆ ಹಲವು ಹಕ್ಕು ನೀಡಿದೆ.ದೇಶದ ಹಿಂದುಳಿದ ಆದಿವಾಸಿ, ಅಲ್ಪಸಂಖ್ಯಾತರಿಗೆ ಹೇಳ ಬಯಸುವೆ ಸಂವಿಧಾನ ರಕ್ಷಣೆಗೆ ಇಂಡಿಯಾ ಕೂಟ ಬದ್ದವಾಗಿದೆಂದರು.

ಮೋದಿ ಅವರು ಶ್ರೀಮಂತರಿಗೆ ಹಣ ನೀಡಿದರೆ ನಾವು ಬಡವರಿಗೆ ನೀಡುತ್ತೇವೆ ಎಂಬುದಕ್ಕೆ ಕರ್ನಾಟಕ ಸರ್ಕಾರವೇ ಸಾಕ್ಷಿ, ಮಹಿಳೆಯರಿಗೆ ಎರೆಡು ಸಾವಿರ, 10 ಕಿಲೋ ಅಕ್ಕಿ, ಎರೆಡು ನೂರು ಯೂನಿಟ್ ವಿದ್ಯುತ್ ನೀಡುತ್ತಿದೆ. ಉಚಿತ ಬಸ್ ಪ್ರಯಾಣ ಸೌಲಭ್ಯ ಮಹಿಳೆಯರಿಗೆ ನೀಡಿದೆ.ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬಂದರೆ ದೇಶದ ಎಲ್ಲಡೆ ತೆರಳಿ ಬಡವರ ಪಟ್ಟಿ ಮಾಡಲಿದೆ. ಆ ಮೂಲಕ ಕುಟುಂಬದ ಓರ್ವ ಮಹಿಳೆಯರಿಗೆ ಮಹಾಲಕ್ಷ್ಮಿ ಯೋಜನೆ ಮೂಲಕ ವಾರ್ಷಿಕ ಒಂದು ಲಕ್ಷ ರೂ ನೀಡಲಿದೆ ಎಂದರು.ಪ್ರತಿ ತಿಂಗಳು ಮೊದಲ ತಾರೀಖಿಗೆ 8500 ರೂ ನಮ್ಮ ಖಾತೆಗೆ ಬೀಳುತ್ತೆ. ರಾಜ್ಯದ ಎರೆಡು ಸಾವಿರ ಸೇರಿ ಹತ್ತು ಸಾವಿರದ ಐದು ನೂರು ರೂಪಾಯಿ ಬರಲಿದೆ.ದೇಶದ ಕೋಟ್ಯಾಂತರ ಜನರಿಗೆ ಈ ಸೌಲಭ್ಯ ನೀಡಲಿದೆಂದರು.

ಪ್ರಧಾನಿಯವರು ಯುವ ಜನತೆಗೆ ಉದ್ಯೋಗ ವಿಲ್ಲವೆಂದರೆ ಪಕೋಡ ಮಾಡಿ ಮಾರಾಟ ಮಾಡಿ ಎಂದು ಹೇಳುತ್ತಾರೆ.ಆದರೆ ನಾವು ಹೇಳುತ್ತೇವೆ ನಿರುದ್ಯೋಗಿ ಪದವೀಧರರಿಗೆ ಸಾರ್ವಜನಿಕ ಉದ್ದಿಮೆಗಳಲ್ಲಿ ಅಪ್ರೆಂಟಿಸಿಫ್ ಮೂಲಕ ತರಬೇತಿ ನೀಡಲಿದೆ. ಒಂದು ವರ್ಷಕ್ಕೆ ಒಂದು ಲಕ್ಷ ರೂ ನೀಡಲಿದೆ.ಆಶಾ ಅಂಗನವಾಡಿ ಕಾರ್ಯಕರ್ತೆಯರಿಗೆ ದ್ವಿಗುಣ ಮಾಡಲಿದೆ. ರೈತರ ಪೂರ್ಣ ಸಾಲ ಮನ್ನಾ ಮಾಡುತ್ತೆವೆ, ನರೇಗ ಕೂಲಿ 400 ರೂ ನೀಡಲಿದೆ. ರೈತರಿಗೆ ಮೋದಿಯವರು 20 ಜನ ಉದ್ದಿಮೆದಾರರ 16 ಲಕ್ಷ ಕೋಟಿ ರೂ ಸಾಲನ್ನಮಾಡಿದರು. ನಸವು ಅಧಿಕಾರಕ್ಕೆ ಬಂದರೆ ಎಲ್ಲಾ ರೈತರ ಸಾಲ ಮನ್ನಾ ಮಾಡಲಿದೆ. ನ್ಯಾಯಯುತವಾದ ಬೆಂಬಲ ಬೆಲೆ ನೀಡಲಿದೆ.

ಅಗ್ನಿವೀರ ಯೋಜನೆ ರದ್ದು ಮಾಡಲಿದೆ. ಜಿಎಸ್ ಟಿ ಬದಲಾಯಿಸಲಿದೆ. ಬಡವರ ಪರವಾದ, ಸರಳವಾದ ಜಿಎಸ್ ಟಿ ತರಲಿದೆ.ಬಿಜೆಪಿ ಎಂದರೆ ಭಾರತೀಯ ಚಂಬು ಪಾರ್ಟಿಯಾಗಿದೆ. ಖಾಲಿ ಚಂಬು ನೀಡಿದೆ.ಕರ್ನಾಟಕ ದೇಶಕ್ಕೆ ನೂರು ರೂ ತೆರಿಗೆ ನೀಡಿದರೆ ಕರ್ನಾಟಕಕ್ಕೆ ಕೇವಲ 13 ರೂ ನೀಡುತ್ತಿದೆ.ಬರ ಪರಿಹಾರ ನೀಡಿಲ್ಲ. ಹಣಕಾಸು ಆಯೋಗ ಏಳು ಸಾವಿರ ಕೋಟಿ ಕೊಡಲಿಲ್ಲ ಎಂದರು.ಸಮಾವೇಶದಲ್ಲಿ ಪಕ್ಷದ ಕರ್ನಾಟಕದ ಉಸ್ತುವಾರಿ ರಣದೀಪ್ ಸುರ್ಜಿವಾಲಾ, ರಾಜ್ಯ ಸಭಾ ಸದಸ್ಯ ಬಿ.ಕೆ.ಹರಿಪ್ರಸಾದ್, ಸಚಿವರಾದ ಸಂತೋಳ್ ಲಾಡ್, ಶಿವರಾಜ್ ತಂಗಡಗಿ, ಬಿ.ನಾಗೇಂದ್ರ, ಜಮೀರ್ ಅಹಮ್ಮದ್, ಶಾಸಕರು, ಪಕ್ಷದ ಬಳ್ಳಾರಿ ಅಭ್ಯರ್ಥಿ ತುಕರಾಂ, ಕೊಪ್ಪಳ ಅಭ್ಯರ್ಥಿ ರಾಜಶೇಖರ್ ಹಿಟ್ನಾಳ್ ಇದ್ದರು.

# ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ಮಾಡಿದ ಮಾಜಿ ಮೇಯರ್ ರಾಜೇಶ್ವರಿ,ವಿಷ್ಣುವರ್ಧನ್



ಬಳ್ಳಾರಿ ಏ–: ಬಳ್ಳಾರಿ ನಗರದ 34ನೆ ವಾರ್ಡಿನ ಭತ್ರಿ ಪ್ರದೇಶದಲ್ಲಿ ಮತ್ತು ವಿವಿಧ ಭಾಗಗಳಲ್ಲಿ ಬಳ್ಳಾರಿ ಜಿಲ್ಲಾ ಲೋಕ ಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಈ.ತುಕಾರಾಮ ಅವರ ಪರವಾಗಿ ಮಹಾನಗರ ಪಾಲಿಕೆಯ ಮಾಜಿ ಮೇಯರ್ ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ರಾಜೇಶ್ವರಿ ಸುಬ್ಬಾ ರಾಯುಡು, ಬೋಯಪಾಟಿ ವಿಷ್ಣುವರ್ಧನ್ ಅವರು ವಾರ್ಡಿನಲ್ಲಿ ಮನೆ ಮನೆಗೆ ತೆರಳಿ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಬೇಕೆಂದು ಮತಯಾಚನೆ ಮಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಐದು ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿರುತ್ತದೆ, ಕೇಂದ್ರದಲ್ಲಿ ರಾಹುಲ್ ಗಾಂಧಿ ನೇತೃತ್ವದಲ್ಲಿ ಜಾರಿಯಾಗಲಿರುವ ಪಂಚ ನ್ಯಾಯ ಗ್ಯಾರೆಂಟಿ ಯೋಜನೆಗಳು ಜಾರಿಯಾಗಬೇಕಾದರೆ, ರಾಜ್ಯ ಮತ್ತು ದೇಶ ಅಭಿವೃದ್ಧಿ ಆಗಬೇಕಾದರೆ ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವಾದ ಮಾಡಿ ಅಧಿಕಾರಕ್ಕೆ ತರಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕರು ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರಾದ ಎಂ. ಸಬ್ಬಾರಾಯುಡು, ಬೋಯಾಪಾಟಿ ವಿಳ್ಳು, ಮಂಜು, ಮಹೇಶ್, ಲಕ್ಷ್ಮಿ, ಪರಮೇಶ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಕೂಸಿನ ಮನೆ 'ಶಿಶು ಪಾಲನಾ ಕೇಂದ್ರ ಉದ್ಘಾಟನೆ: ದುಡಿಯುವ ಮಹಿಳೆಯರಿಗೆ ಆಸರೆ



ಯರಗಟ್ಟಿ: ನರೇಗಾ ಯೋಜನೆಯಲ್ಲಿ ಕೂಲಿ ಕಾರ್ಮಿಕ ಮಕ್ಕಳ ಪೋಷಣೆ ಮತ್ತು ಪಾಲನೆಗಾಗಿ ಸರ್ಕಾರ ನೂತನವಾಗಿ ಕೂಸಿನ ಮನೆ 'ಶಿಶು ಪಾಲನಾ ಕೇಂದ್ರ' ಯೋಜನೆ ಜಾರಿಗೆ ತಂದಿದ್ದು ತಾಲ್ಲೂಕಿನಲ್ಲಿ ಮೊದಲ ಬಾರಿಗೆ ಸಮೀಪದ ಸತ್ತಿಗೇರಿ ಗ್ರಾಮದಲ್ಲಿ ಪ್ರಾರಂಭಗೊಂಡಿದೆ.

ಗ್ರಾಮಾಂತರ ಭಾಗದಲ್ಲಿ ಮಹಿಳಾ ಕೂಲಿ ಕಾರ್ಮಿಕರಿಗೆ ಮನೆಯಲ್ಲಿ ಮಕ್ಕಳನ್ನು ನೋಡಿಕೊಳ್ಳಲು ಯಾರು ಇರುವುದಿಲ್ಲ. ಮಕ್ಕಳ ಲಾಲನೆ ಪಾಲನೆಗೆ ತಾಯಿ ಸಾಕಷ್ಟು ಸಮಯ ನೀಡಬೇಕಾಗುತ್ತದೆ. ಆದರೆ, ಕೆಲಸ ಮಾಡುವ ಮಹಿಳೆ ಮಕ್ಕಳಿಗೆ ಸಮಯ ಕೊಡುವುದಾಗಿ ನೋಡಿಕೊಳ್ಳುವುದಕ್ಕಾಗಲಿ ಆಗುವುದಿಲ್ಲ.

ಇಂತಹ ಕಠಿಣ ಪರಿಸ್ಥಿತಿಯಲ್ಲಿ ಮಕ್ಕಳ ಪಾಲನೆಗಾಗಿ ಸರ್ಕಾರ ಮಕ್ಕಳನ್ನು ಒಳ್ಳೆಯ ವಾತಾವರಣದಲ್ಲಿ ಬೆಳೆಸಿ, ಆರೋಗ್ಯವಂತರಾಗಿ ನೋಡಿಕೊಳ್ಳಲು ತರಬೇತಿ ಪಡೆದ ಸಿಬ್ಬಂದಿಗಳನ್ನು ನಿಯೋಜಿಸಿ ಕೂಸಿನ ಮನೆ ಯೋಜನೆ ಜಾರಿಗೊಳಿಸಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಾಗಿ ದುಡಿಯುವ ಮಹಿಳೆಯರು ತಮ್ಮ ಆರು ತಿಂಗಳಿನಿಂದ ಮೂರು ವರ್ಷದವರೆಗಿನ ಮಕ್ಕಳನ್ನು ಕೂಸಿನ ಮನೆ 'ಶಿಶು ಪಾಲನಾ ಕೇಂದ್ರ'ದಲ್ಲಿ ಬಿಟ್ಟು ನೆಮ್ಮದಿಯಾಗಿ ಕೆಲಸ ಮಾಡಬಹುದಾಗಿದೆ.

ಈ ವೇಳೆ ನರೇಗಾ ಸಹಾಯಕ ನಿರ್ದೇಶಕರಾದ ರಾಮಪ್ಪ ರಕ್ಕಸಗಿ, ಪಿಡಿಓ ಎ. ಬಿ. ಬಂಗಾರಿ, ಚಂದ್ರು ಪಾಟೀಲ, ಕೂಸಿನ ಮನೆ ಆರೇಕೆದಾರರು, ಆಶಾ ಅಂಗನವಾಡಿ ಕಾರ್ಯಕರ್ತೆಯರು ಪಂಚಾಯತ ಸಿಬ್ಬಂದಿ ವರ್ಗದವರು ಇದ್ದರು.

# ಲಾಭದಲ್ಲಿ ಜ್ಯೋತಿರ್ಲಿಂಗ ವಿವಿಧ ಉದ್ದೇಶಗಳ ಸಹಕಾರಿ ಸಂಘ



ಮೂಡಲಗಿ: ಕಡಿಮೆ ಅವಧಿಯಲ್ಲಿ ಜ್ಯೋತಿರ್ಲಿಂಗ ವಿವಿಧ ಉದ್ದೇಶಗಳ ಸಹಕಾರಿ ಸಂಘವು 2023–24ನೇ ಸಾಲಿನ ಹಣಕಾಸು ವರ್ಷದ ಅಂತ್ಯಕ್ಕೆ 50.25 ಲಕ್ಷ ಲಾಭ ಗಳಿಸಿ ಪ್ರಗತಿಯ ಪಥದಲ್ಲಿ ಸಾಗುತ್ತಿದೆ ಎಂದು ಸಂಘದ ಅಧ್ಯಕ್ಷ ಲಕ್ಷ್ಮಣ ಭೀ.ಮಾಲಗಾರ ತಿಳಿಸಿದರು.

ಅವರು ಶುಕ್ರವಾರದಂದು ಪಟ್ಟಣದ ಜ್ಯೋತಿರ್ಲಿಂಗ ವಿವಿಧ ಉದ್ದೇಶಗಳ ಸಹಕಾರಿ ಸಂಘದ ಸಭಾ ಭವನದಲ್ಲಿ ಸಂಘದ ಪ್ರಗತಿಯ ಕುರಿತು ಕರೆದ ಪ್ರತಿಕಾಗೋಷ್ಠಿಯಲ್ಲಿ ಮಾತನಾಡಿ, ಸಂಘವು ಅಲ್ಪಾವಧಿಯಲ್ಲಿ 25.93 ಲಕ್ಷ ರೂ ಶೇರು ಬಂಡವಾಳ ಹೊಂದಿ, 1.34 ಕೋಟಿ ರೂ ಕಾಯ್ದಿಟ್ಟ ನಿಧಿಗಳು, 11.53 ಕೋಟಿ ಠೇವು ಸಂಗ್ರಹಿಸಿ, ಠೇವುದಾರ ಭದ್ರತೆಗಾಗಿ 3.84 ಕೋಟಿ ರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಗುಂತಾವಣಿಗಳನ್ನು ಮಾಡಿ ಸಂಘದ ಗ್ರಾಹಕರಿಗೆ ವಿವಧ ತೇರನಾದ 8.75 ಕೋಟಿ ರೂ ಸಾಲ ವಿತರಣೆ, ಒಟ್ಟು 13.88 ಕೋಟಿ ರೂ ದುಡಿಯುವ ಬಂಡವಾಳ ಹೊಂದಿ 50.25 ಲಕ್ಷ ರೂ ಲಾಭ ಗಳಿಸಿದೆ ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಮಲ್ಲಪ್ಪಾ ಮುತಾರಿ, ನಿರ್ದೇಶಕರಾದ ಈರಪ್ಪಾ ಬನ್ನೂರ, ಪರಮಾನಂದ ಬಡ್ಡಿ, ನಂಗಪ್ಪಾ ಈರಪ್ಪನವರ, ಭೀಮಪ್ಪಾ ಅವರಾದಿ, ಪ್ರಕಾಶ ಈರಪ್ಪನವರ, ಮಲ್ಲಪ್ಪಾ ಮಾಲಗಾರ, ಈರಪ್ಪ ಬಾಗಿ, ಬಸವ್ವಾ ಮಾಲಗಾರ, ಲಕ್ಷ್ಮೀ ಕೊತಂಬರಿ, ಅನಿತಾ ಪೋಳ ಹಾಗೂ ಸಂಘದ ಮಾರ್ಗದರ್ಶಕರಾದ ಚನ್ನಬಸು ಬಡ್ಡಿ, ಶಂಕರ ಕೊತಂಬರಿ, ಬಸವರಾಜ ಮಾಲಗಾರ, ಪ್ರಧಾನ ಕಾರ್ಯದರ್ಶಿ ವಿಠ್ಠಲ ಕಮತೆ ಮತ್ತು ಸಂಘದ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಅಂಬರೀಷ್ ಸಹ ವಿಲನ್ ಇದ್ರು ನಂತ್ರ ಹೀರೋ ಆದ್ರು, ಅದೇ ತರಹ ನಾನು ಆಮೇಲೆ ಹೀರೋ ಆಗಬಯಸೋದು ಎಂದ ರೆಬಲ್ ಯತ್ನಾಳ



ವಿಜಯಪುರ–:ತಮ್ಮ ನೇರ, ದಿಟ್ಟ ನುಡಿಗಳ ಮೂಲಕ ಕಮಲ ಪಾಳೇಯದ ಫೈರ್ ಬ್ರಾಂಡ್ ರಾಜಕಾರಣಿ ಎಂದೇ ಕರೆಸಿಕೊಳ್ಳುವ, ಹಾರ್ಡ್ಕೋರ್ ಹಿಂದುತ್ವವಾದಿಯಾದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಇದೀಗ ತಮ್ಮ ಎಂದಿನ ಖಡಕ್ ತಮ್ಮನ್ನು ವಿಲನ್‌ಗೆ ಹೋಲಿಕೆ ಮಾಡಿಕೊಂಡಿದ್ದು, "ಐ ಯಾಮ್ ವಿಲನ್" ಎಂದು ಅಬ್ಬರಿಸಿದ್ದಾರೆ. ಈ ಮೂಲಕ ತಮ್ಮ ಎದುರಾಳಿಗಳ ಎದೆಯಲ್ಲಿ ಇನ್ನಷ್ಟು ನಡುಕ ಹುಟ್ಟಿಸಿದ್ದಾರೆ. ಲೋಕಸಭಾ ಚುನಾವಣೆ ಹೊಸ್ತಿಲಲ್ಲೇ ಇನ್ನೊಂದು ರಣರೋಚಕ ಕದನಕ್ಕೆ ಮುನ್ನುಡಿ ಬರೆದಿದ್ದಾರೆ.

ನಾನು ಯಾವತ್ತಿದ್ರು ವಿಲನ್, ನಾನು ಹೀರೋ ಅಲ್ಲ, ವಿಲನ್ ಇದ್ರೇನೇ ಹಿರೋಗೆ ಕಿಮ್ಮತ್ತು ಇರುತ್ತೆ, ಇಲ್ಲದಿದ್ರೆ ಇಲ್ಲ. ವಿಲನ್ ಇಲ್ಲದಿದ್ರೆ ಹೀರೋ ಯಾರ ಜೋಡಿ ಫೈಟ್ ಮಾಡ್ತಾನೆ? ಅಂಬರೀಷ್ ಸಹ ವಿಲನ್ ಇದ್ರು ನಂತ್ರ ಹೀರೋ ಆದ್ರು, ಅದೇ ತರಹ ನಾನು ಆಮೇಲೆ ಹೀರೋ ಆಗಬಯಸೋದು ಎಂದು ಹೇಳುತ್ತ ಬಿಜೆಪಿಯ ಆಂತರಿಕ ಕಚ್ಚಾಟದ ಹಲವು ಸಂಗತಿಗಳನ್ನು ಒಗಟಾಗಿ ಬಿಚ್ಚಿಡುತ್ತಲ್ಲೇ ವಿಲನ್, ಹೀರೋ ಪರಿಕಲ್ಪನೆಯಲ್ಲಿ ಒಂದರ್ಥದಲ್ಲಿ ಬಿಜೆಪಿಗೆ ಟ್ರಬಲ್ ಆಗಿ ಪರಿಣಮಿಸಿರುವ ಇವರು ರೆಬೆಲ್ ಸ್ಟಾರ್ ಅನ್ನು ನೆನಪಿಸಿಕೊಂಡು ಉದಾಹರಣೆ ಸಹಿತವಾಗಿ ಕೆಲವು ವಿಷಯಗಳನ್ನು ಮಾರ್ಮಿಕವಾಗಿ ವಿವರಿಸಿದ್ದಾರೆ.

ಇತ್ತೀಚೆಗೆ ಕಲಬುರಗಿಯಲ್ಲಿ ಸುದ್ದಿಗಾರರೊದಿಗೆ ಮಾತನಾಡಿದ ವೇಳೆ ಅವರು, ತಮ್ಮನ್ನು ಆಲ್ ಪಾರ್ಟಿ ವಿಪಕ್ಷ ನಾಯಕ ಎಂದು ತಾವೇ ಬಣ್ಣಿಸಿಕೊಂಡರಲ್ಲದೆ ಎಲ್ಲದಕ್ಕೂ ಒಂದು ಅಂತ್ಯ ಅಂತ ಇರುತ್ತೆ. ಅದು 2024 ಲೋಕಸಭೆ ಚುನಾವಣೆ ನಂತರದಲ್ಲಿ ಎಲ್ಲರು ಅನುಭವಿಸುತ್ತಾರೆಂದು ಒಗಟಾಗಿ ನುಡಿದರು. ಇದರಿಂದ ಬಿಜೆಪಿ ಪಕ್ಷದ ಬಲಿಷ್ಠರು ಕೂಡ ಮತ್ತಷ್ಟು ದಿಗಿಲು ಬೀಳುವಂತೆ ಮಾಡಿದ್ದಾರೆ.

ಎಂದಿನಂತೆ (ಯಡಿಯೂರಪ್ಪನವರ ಹೆಸರು ಉಲ್ಲೇಖಿಸದೇ) 2024ರ ವರೆಗೆ ತಡೆಯಿರಿ, ಆಮೇಲೆ ಎಲ್ಲವೂ ಬದಲಾವಣೆಯಾಗುತ್ತೆ, ಅವರು ದೊಡ್ಡ ದೊಡ್ಡ ಹುದ್ದೆ ತೆಗೆದುಕೊಂಡಿದ್ದಾರೆ. ಪರಿಷತ್ ವಿಪಕ್ಷ ನಾಯಕ ಸ್ಥಾನವೊಂದು ಎನ್. ರವಿಕುಮಾರ್‌ಗೆ ಕೊಡುತ್ತಾರೆ. ರವಿಕುಮಾರ್ ಯಡಿಯೂರಪ್ಪ ಶಿಷ್ಯ ಅಲ್ವಾ? ಅದಕ್ಕೇ ಆ ಹುದ್ದೆ ಅವರಿಗೆ ಗಿಫ್ಟ್. ಮತ್ತೊಮ್ಮೆ ಮೋದಿ ಪ್ರಧಾನಿಯಾಗಲಿ ಅವಾಗ ಬದಲಾವಣೆಯಾಗುತ್ತೆ ಎಂದು ಭವಿಷ್ಯ ನುಡಿದಿದ್ದಾರೆ. ಇದರಿಂದ ಕಮಲ ಪಾಳೇಯದ ಕೆಲವರು ಒಳಗೊಳಗೆ ಕೊತಕೊತ ಕುದಿಯುತ್ತಾ ತಮ್ಮ ಕೈ ಹಿಚುಕಿಕೊಳ್ಳುತ್ತಿದ್ದಾರೆ.ರಾಜ್ಯದಲ್ಲಿರುವ ಎಲ್ಲಾ 28ಕ್ಕೆ 28 ಸ್ಥಾನ ಗೆಲ್ಲುತ್ತೇವೆಂದಿದ್ದಾರೆ. ಒಂದು ಕಡಿಮೆಯಾದ್ರೂ ಮುಂದೆ ರಾಜಸ್ಥಾನ, ಮಧ್ಯಪ್ರದೇಶದಲ್ಲಾದಂತೆ ಕರ್ನಾಕದಲ್ಲೂ ಆಗುತ್ತದೆ. ಇದು ಮೀಲಾಪಿ ಕುಸ್ತಿಯಿದೆ. ಶಿಕಾರಿಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಠೇವಣಿ ಹೋಗುತ್ತದೆ. ಕನಕಪುರದಲ್ಲಿ ಅಶೋಕ ಠೇವಣಿ ಹೊಗುತ್ತದೆ ಅಂದ್ರೆ ಏನ್ ಅರ್ಥ? ಪಾಪ ಸೋಮಣ್ಣ ಬೆಂಗಳೂರಲ್ಲಿ ಗೆಲ್ತಿದ್ರು, ಅವರನ್ನೆ ಎರಡೂ ಕಡೆ ನಿಲ್ಲಿಸಿ ಸೋಲಿಸಿದ್ರು ಎಂದು ಪಕ್ಷದೊಳಗಿನ ಒಳ ರಾಜಕೀಯವನ್ನು ವಿವರಿಸಿದರು.ನಾನು ಏನ್ ಮಾತನಾಡದ್ರು ನಂಗೆ ಯಾರು ನೋಟಿಸ್ ಗಿಟೀಸ್ ಕೊಡೋದಿಲ್ಲವೆಂದು ಹೇಳುತ್ತಲೇ ತಾವೀಗ ಸರ್ವ ಸ್ವತಂತ್ರ ಎಂದು ಇನ್ನೊಮ್ಮೆ ಅಬ್ಬರಿಸಿದ್ದಾರೆ.

ಇನ್ನೊಂದೆಡೆ ಸ್ವಪಕ್ಷೀಯರ ವಿರುದ್ಧವೇ ಎಂದಿನಂತೆ ತಮ್ಮ ವಾಗ್ದಾಳಿ ಮುಂದುವರೆಸಿರುವ ಬಿಜೆಪಿಯ ಫೈರ್ ಬ್ರಾಂಡ್ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಅವರು, ನನ್ನನ್ನು ಪಕ್ಷದಿಂದ ಉಚ್ಚಾಟಿಸಿದ್ರೆ 40 ಸಾವಿರ ಕೋಟಿ ರೂಪಾಯಿ ಅವ್ಯವಹಾರದ ದಾಖಲೆ ರಿಲೀಸ್ ಮಾಡುತ್ತೇನೆ ಎಂದು ಸ್ಫೋಟಕ ಹೇಳಿಕೆಯನ್ನೂ ನೀಡಿದ್ದಾರೆ. ಇದರಿಂದ ಕಮಲ ನಾಯಕರನ್ನು ಇನ್ನಷ್ಟು ಪೇಚಿಗೆ ಸಿಲುಕಿಸಿದ್ದಾರೆ.

ಕೆಲವು ದಿನಗಳ ಹಿಂದಷ್ಟೇ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವೇಳೆ ಯತ್ನಾಳ್, ಸತ್ಯ ಹೇಳಿದರೆ ಎಲ್ಲರಿಗೂ ಭಯವಾಗುತ್ತದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋವಿಡ್ ಸಂದರ್ಭದಲ್ಲಿ 40 ಸಾವಿರ ಕೋಟಿ ರೂಪಾಯಿಯ ಅವ್ಯವಹಾರ ನಡೆದಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

ನಾನು ಪ್ರಧಾನಿ ಮೋದಿ ಅವರಿಗಾಗಿ ಕೆಲಸ ಮಾಡುತ್ತಿದ್ದೇನೆ. ಹೀಗಾಗಿ ನನಗೆ ನೋಟಿಸ್ ಕೊಟ್ಟು ಪಕ್ಷದಿಂದ ಉಚ್ಚಾಟಿಸಿ ನೋಡಲಿ. ಆಗ ಇವರೆಲ್ಲರ ಬಣ್ಣ ಬಯಲು ಮಾಡುತ್ತೇನೆ ಎಂದು ಸವಾಲ್ ಹಾಕಿದ್ದಾರೆ. ಯತ್ನಾಳ ಅವರ (ಸಂಪತ್ತಿನ) ಸವಾಲ್‌ನ್ನು ಕಮಲ ನಾಯಕರು ಹೇಗೆ ಸ್ವೀಕರಿಸುತ್ತಾರೋ, ಗೊತ್ತಿಲ್ಲ.

45 ರೂಪಾಯಿ ಮಾಸ್ಕ್ ಗೆ 485 ರೂಪಾಯಿ ಬಿಲ್ ಹಾಕಿದ್ದಾರೆ. ಬೆಡ್‌ಗಳಿಗೆ ಒಂದು ದಿನಕ್ಕೆ 10 ಸಾವಿರ ರೂಪಾಯಿ ಬಾಡಿಗೆ ನೀಡಿದ್ದಾರೆ. ಖರೀದಿ ಮಾಡಿದ್ರೆ ಒಂದು ದಿನದ ಬಿಲ್ ನಲ್ಲಿ ಎರಡು ಬೆಡ್ ಬರ್ತಿದ್ದವು. ಮಾಸ್ಕ್, ಬೆಡ್‌ಗಳಲ್ಲೂ ಭ್ರಷ್ಟಾಚಾರ ನಡೆದಿದೆ ಎಂದು ಅವರು ಗಂಭೀರವಾಗಿ ಆರೋಪಿಸಿದ್ದಾರೆ.

(ಈ ಹಿಂದೆ) ನಮ್ಮ ಸರ್ಕಾರ (ಬಿಜೆಪಿ) ಇದ್ರೆ ಏನು ಆಯ್ತು? ಕಳ್ಳರು ಕಳ್ಳರೇ ಅಲ್ವಾ? ನನಗೆ ಆಸ್ಪತ್ರೆಯಲ್ಲಿ 5 ಲಕ್ಷ ರೂಪಾಯಿ ಬಿಲ್ ಹಾಕಿದರು. ಇನ್ನು ಬಡವರು ಏನು ಮಾಡಬೇಕು. ಕೊರೋನಾ ವೇಳೆ ಕೋಟಿ ಕೋಟಿ ಲೂಟಿ ಆಗಿದೆ ಎಂದು ಅವರು ದೂರಿದ್ದಾರೆ.

ಇನ್ನು ಕಳೆದ ಬಿಜೆಪಿ ಸರ್ಕಾರ ಅವಧಿಯಲ್ಲಿ ಆರೋಗ್ಯ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಹಗರಣದ ಬಗ್ಗೆ ತನಿಖೆಗೆ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಜಾನ್ ಮೈಕಲ್ ಕುನ್ಹಾ ನೇತೃತ್ವದಲ್ಲಿ ವಿಚಾರಣಾ ಆಯೋಗ ರಚಿಸಿ ರಾಜ್ಯ ಸರ್ಕಾರ ಈಗಾಗಲೇ ಆದೇಶ ಹೊರಡಿಸಿದೆ.

ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋವಿಡ್ ನಿರ್ವಹಣೆ, ತಡೆಗಟ್ಟಲು ಔಷಧ, ಉಪಕರಣಗಳು ಹಾಗೂ ಸಾಮಾಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳ ಕುರಿತು ತನಿಖೆಗೆ ನ್ಯಾ. ಕುನ್ಹಾ ಅವರ ನೇತೃತ್ವದಲ್ಲಿ ತನಿಖಾ ಆಯೋಗ ರಚಿಸಿದ್ದು, ಮೂರು ತಿಂಗಳಲ್ಲಿ ವರದಿ ನೀಡುವಂತೆ ಸೂಚಿಸಲಾಗಿದೆ.

2021ರ ಜುಲೈ–ಆಗಸ್ಟ್ ನಲ್ಲಿ ನಡೆದ 'ಸಾರ್ವಜನಿಕ ಲೆಕ್ಕಪತ್ರ ಸಮಿತಿ' ನೀಡಿರುವ ವರದಿಯಲ್ಲಿನ ಗಂಭೀರ ಆರೋಪಗಳ ಕುರಿತು ತನಿಖಾ ಆಯೋಗ ರಚನೆ ಮಾಡಲಾಗಿದೆ. ಈ ಆಯೋಗಕ್ಕೆ ಸಂಬಂಧಪಟ್ಟಂತೆ ಆಯಾ ಇಲಾಖೆಯ ಸಂಬಂಧಿಸಿದ ಅಧಿಕಾರಿಗಳು ಆಯೋಗವು ಕಾಲಾನುಕಾಲಕ್ಕೆ ತನಿಖೆಗಾಗಿ ಅಪೇಕ್ಷಿಸುವ ಎಲ್ಲ ಕಡತಗಳು/ದಾಖಲಾತಿಗಳು/ಇತ್ಯಾದಿಗಳನ್ನು ಒದಗಿಸತಕ್ಕದ್ದು ಎಂದು ಆದೇಶದಲ್ಲಿ ಹೇಳಲಾಗಿದೆ.ಕೋವಿಡ್ ಸಂದರ್ಭದಲ್ಲಿ 4 ಸಾವಿರ ಕೋಟಿ ರೂ.ಗಳ ಹಗರಣವಾಗಿರಬಹುದು ಎಂದು ನಾವು ಭಾವಿಸಿದ್ದೆವು. ಈಗ ನಮ್ಮ ಮಾಹಿತಿ ತಪ್ಪು ಎಂದು ಸ್ಪಷ್ಟವಾಗಿದೆ. ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು 4 ಸಾವಿರ ಕೋಟಿ ಅಲ್ಲ, 40 ಸಾವಿರ ಕೋಟಿ ಎಂದು ಹೇಳುವ ಮೂಲಕ ತನಿಖೆಗೆ ನೆರವಾಗಿದ್ದಾರೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಹೈಕೋರ್ಟ್ ನಿವೃತ್ತ ನ್ಯಾಯಾಧೀಶರು ಹಗರಣದ ತನಿಖೆ ನಡೆಸಲಿದ್ದಾರೆ. ಇದು 4,000 ಕೋಟಿ ರೂ.ಗಳ ಹಗರಣ ಎಂದು ನಾವು ಭಾವಿಸಿದ್ದೆವು. ಆದರೆ, ಯತ್ನಾಳ್ ಅವರು ಒಟ್ಟು ಮೊತ್ತವನ್ನು ಬಹಿರಂಗಪಡಿಸುವ ಮೂಲಕ ತನಿಖಾ ಸಂಸ್ಥೆಗೆ ಸಹಾಯ ಮಾಡಿದ್ದಾರೆ. ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆ ನಡೆಯುತ್ತಿದೆ. ತನಿಖಾ ಸಮಿತಿ ಕಾನೂನು ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತದೆ. ಯಾರಿಗೆ ನೋಟಿಸ್ ನೀಡಬೇಕು, ಯಾವ ರೀತಿ ವಿಚಾರಣೆ ನಡೆಸಬೇಕೆಂಬುದನ್ನು ಸಮಿತಿ ತೀರ್ಮಾನಿಸುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ. ಮುಂದೇನಾಗುತ್ತೋ ಕಾದು ನೋಡೋಣ...

– ಮಂಜುನಾಥ.ಎಸ್. ಕಟ್ಟಿಮನಿ